**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ವಿರಾಜಪೇಟೆ**

**ಸಿ.ಸಿ. ಸಂಖ್ಯೆ ಃ 176/2023**

**ಚಾಸಾ ಃ 9**
**ಪ್ರಾಸಾ ಃ 5**

| | |
|---|---|
| **ಹೆಸರು** | ಃ ಅರ್ಪಿತಾ ಬಿ ಎಂ |
| **ಗಂಡನ ಹೆಸರು** | ಃ ಚಂದ್ರಶೇಖರ್ ಹೆಚ್ ಕೆ |
| **ವಯಸ್ಸು** | ಃ 31 ವರ್ಷ |
| **ಉದ್ಯೋಗ** | ಃ ಪೋಲಿಸ್ ಪೇದೆ, ವಿರಾಜಪೇಟೆ ನಗರ ಪೋಲಿಸ್ ಠಾಣೆ |
| **ವಾಸಸ್ಥಳ** | ಃ ವಿರಾಜಪೇಟೆ ನಗರ |

**ದಿನಾಂಕ ಃ 24-06-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಮಾನ್ಯ ಸ. ಸ. ಅ. ರವರಿಂದ ಃ -**

1. ನಾನು ದಿನಾಂಕ 17-02-2022 ರಿಂದ ಇಲ್ಲಿಯವರೆಗೆ ವಿರಾಜಪೇಟೆ ನಗರ ಪೋಲಿಸ್ ಠಾಣೆಯಲ್ಲಿ ಮಹಿಳಾ ಪೋಲಿಸ್ ಪೇದೆ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2. ದಿನಾಂಕ 03-12-2022 ರಂದು ನಾನು ಕರ್ತವ್ಯದಲ್ಲಿದ್ದ ಸಂದರ್ಭದಲ್ಲಿ ಚಾಸಾ11 ರವರು ನನಗೆ ಈ ಪ್ರಕರಣದಲ್ಲಿ ಕೃತ್ಯ ಸ್ಥಳದ ಮಹಜರನ್ನು ಜರುಗಿಸುವ ಸಂದರ್ಭದಲ್ಲಿ ಜೊತೆಯಲ್ಲಿ ಬರಬೇಕೆಂದು ತಿಳಿಸಿದ ಮೇರೆಗೆ, ನಾನು, ಸದರಿಯವರ ಜೊತೆ ಕೃತ್ಯ ಸ್ಥಳಕ್ಕೆ ಹೋಗಿರುತ್ತೇನೆ. ಕೃತ್ಯ ಸ್ಥಳಕ್ಕೆ ಹೋದಾಗ ಚಾಸಾ1 ರವರು ಹಾಜರಿರುತ್ತಾರೆ. ಚಾಸಾ1 ರವರು ಕೃತ್ಯ ಸ್ಥಳವನ್ನು ತೋರಿಸಿಕೊಟ್ಟ ಮೇರೆಗೆ ಚಾಸಾ2 ಹಾಗೂ 3 ರವರ ಸಮಕ್ಷಮ ಮಹಜರ ಕ್ರಮ ಜರುಗಿಸಿ, ಸ್ಥಳದಲ್ಲಿ ಚಾಸಾ1 ರವರು ಮದುವೆಯ ಆಮಂತ್ರಣ ಪತ್ರಿಕೆ, ಲಗ್ನ ಪತ್ರಿಕೆ ಹಾಗೂ ಮದುವೆಯ ಸಮಯದಲ್ಲಿ ತೆಗೆದ ಎರಡು ಭಾವಚಿತ್ರಗಳನ್ನು ಹಾಜರುಪಡಿಸಿದ ಮೇರೆಗೆ ಚಾಸಾ1, 2 ಹಾಗೂ 3 ರವರ ಸಮಕ್ಷಮ ಮಹಜರ ಕ್ರಮ ಜರುಗಿಸಿ, ಸದರಿ ಸ್ವತ್ತುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತೇವೆ. ಸದರಿ ಮಹಜರಿನ ಸಮಯದಲ್ಲಿ ಫೋಟೋ ಸಹ ತೆಗೆದಿರುತ್ತೇವೆ.

3. ಈ ಬಗ್ಗೆ ಚಾಸಾ11 ರವರಿಗೆಹೇಳಿಕೆಯನ್ನು ನೀಡಿರುತ್ತೇನೆ. ಸಾಕ್ಷಿಯು ಕೃತ್ಯ ಸ್ಥಳ ಮಹಜರನ್ನು ನೋಡಿ ಗುರುತಿಸಿದ್ದನ್ನು ಈಗಾಗಲೇ ನಿಪಿ2 ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿ2 ಡಿ ಎಂದು ಗುರುತಿಸಲಾಯಿತು. ಸಾಕ್ಷಿಯು ಲಗ್ನ ಪತ್ರಿಕೆ, ಆಮಂತ್ರಣ ಪತ್ರಿಕೆ ಹಾಗೂ ಎರಡು ಭಾವಚಿತ್ರಗಳನ್ನು ನೋಡಿ ಗುರುತಿಸಿದ್ದನ್ನು ಈಗಾಗಲೆ ನಿಪಿ3 ರಿಂದ 8 ಎಂದು ಗುರುತಿಸಲಾಗಿದೆ.

ಮುಖ್ಯ ವಿಚಾರಣೆ ಮುಕ್ತಾಯ.

**<u>ಪಾಟಿ ಸವಾಲು ಃ ಆರೋಪಿ ಪರ ಶ್ರೀಮತಿ. ವಿ ಸಿ ಪಿ ವಕೀಲರಿಂದ ಃ</u>**

1. ನಾನು ದಿನಾಂಕ 03-12-2022 ರಂದು ಕರ್ತವ್ಯದಲ್ಲಿದ್ದ ಬಗ್ಗೆ ಠಾಣಾ ಡೈರಿಯಲ್ಲಿ ನಮೂದು ಮಾಡಿರುತ್ತೇನೆ. ಚಾಸಾ1 ರವರು ಕೃತ್ಯ ಸ್ಥಳವನ್ನು ತೋರಿಸಿಕೊಟ್ಟಿಲ್ಲ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ನಿಪಿ2 ರಂತೆ ಮಹಜರ ಕ್ರಮವನ್ನು ಜರುಗಿಸಿ ನಿಪಿ3 ರಿಂದ 6 ದಾಖಲೆಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ7 ಹಾಗೂ 8 ಫೋಟೋಗಳನ್ನು ಈ ಪ್ರಕರಣಕ್ಕೆ ಸೃಷ್ಟಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ನಿಪಿ2 ನ್ನು ಈ ಪ್ರಕರಣಕ್ಕೆ ಸೃಷ್ಟಿ ಮಾಡಲಾಗಿದೆ ಎಂದರೆ ಸರಿಯಲ್ಲ. ನಮ್ಮ ಮೇಲಾಧಿಕಾರಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲು ಮುಕ್ತಾಯ.

ಮರು ವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ. ಹೇ. ಕೇ. ಸ. ಇದೆ.

ಸಹಿ/-
(ಪ್ರದೀಪ ಪೋತೆದಾರ)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
ವಿರಾಜಪೇಟೆ.